REGISTERED WITH RNI NEW DELHI REG. N0.69683/97-Postal Registration No.RNP/KA/BGS/2259/2021-2023
Office of Posting: Bangalore PSO, Bangalore - 560026.; Date of Posting & Publishing Every Wednesday; Price Rs. 2 (Pages-8)

ಪಟ್ಟಣ ಸಹಕಾರ ಬ್ಯಾಂಕುಗಳ

# ವಾರ್ತಾ ಪತ್ರಿಕೆ

ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಅಧಿಕೃತ ವಾರಪತ್ರಿಕೆ

ಸಂಪುಟ : 30 । ಸಂಚಿಕೆ : 33 । ನವೆಂಬರ್ 22, 2023 । ಬುಧವಾರ । ಪುಟಗಳು : 8 । ಬೆಲೆ : 2/-

## 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಉದ್ಘಾಟನೆ

## ಸಹಕಾರ ಕ್ಷೇತ್ರ ಜನಾಂದೋಲನವಾಗುವ ಮೂಲಕ ಆರ್ಥಿಕ ಚಟುವಟಿಕೆ ಹೆಚ್ಚಾಗಬೇಕು – ಸಹಕಾರ ಸಚಿವ ಕೆ.ಎನ್. ರಾಜಣ್ಣ



**ಶಿವಮೊಗ್ಗ :** ಸಹಕಾರ ಕ್ಷೇತ್ರ ಜನಾಂದೋಲನವಾಗಬೇಕು. ಧ್ವನಿ ಇಲ್ಲದವರಿಗೆ ಧ್ವನಿಯಾಗಬೇಕು. ಈ ಬಾರಿಯ ಸಪ್ತಾಹದ ಮುಖ್ಯ ಉದ್ದೇಶವೇ 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಸಾಧನೆಯಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಮತ್ತು ಸುಸ್ಥಿರ ಅಭಿವೃದ್ಧಿಯ ಗುರಿಯೇ ಆಗಿದೆ. ಈ ಮೂಲಕ ರಾಜ್ಯವೂ ಸೇರಿದಂತೆ ಇಡೀ ದೇಶದಲ್ಲಿ ಸಹಕಾರ ಕ್ರಾಂತಿ ಆಗಲಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಹೇಳಿದರು.

ದಿನಾಂಕ : 14/11/2023 ರಂದು ನಗರದ ಕುವೆಂಪು ರಂಗಮಂದಿರದಲ್ಲಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಹಾಗೂ ವಿವಿಧ ಸಹಕಾರ ಸಂಘಗಳು ಮತ್ತು ಸಹಕಾರ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಾಥಮಿಕ ಮತ್ತು ಸಾಕ್ಷರತಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿ, ಸಹಕಾರ ಕ್ಷೇತ್ರ ಸರ್ಕಾರ ಮಾಡದ ಕೆಲಸಗಳನ್ನು ಮಾಡುತ್ತದೆ. ಸಹಕಾರ ಕ್ಷೇತ್ರ ಎಂದರೆ ರೈತರಿಗೆ ಜೀವಕೋಶ ಇದ್ದಂತೆ. ಇದನ್ನು ಮತ್ತಷ್ಟು ಬಲಪಡಿಸಬೇಕು.

ಸಹಕಾರ ಕ್ಷೇತ್ರದ ಅನೇಕ ಸಮಸ್ಯೆಗಳನ್ನು ನಾವೆಲ್ಲರೂ ಸೇರಿ ಬಗೆಹರಿಸೋಣ. ಆದರೆ, ರೈತರು ಸಹಕಾರ ಕ್ಷೇತ್ರವನ್ನೇ ನಂಬಿಕೊಂಡಿದ್ದಾರೆ. ರೈತರನ್ನು ಮೇಲೆತ್ತುವ ಕೆಲಸ ಸಹಕಾರ ಸಂಸ್ಥೆಗಳಿಂದ ಆಗಬೇಕು ಎಂದರು.

ಶಾಸಕ ಎಸ್.ಎನ್. ಚನ್ನಬಸಪ್ಪರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಶಾಸಕರು ಸಹಕಾರ ಇಲಾಖೆ ಪ್ರಧಾನ ಕಾರ್ಯದರ್ಶಿ ಎನ್. ಮಂಜುನಾಥ ಪ್ರಸಾದ್, ಸಹಕಾರ ಸಂಘಗಳ ನಿಬಂಧಕರಾದ ಕ್ಯಾಪ್ಟನ್ ಡಾ. ಕೆ. ರಾಜೇಂದ್ರ, ಜಿಲ್ಲಾಧಿಕಾರಿ ಡಾ. ಸೆಲ್ವಮಣಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಮಿಥುನ್ ಕುಮಾರ್, ಸಿಇಒ ಸ್ನೇಹಲ್ ಸುಧಾಕರ್ ಲೋಖಂಡೆ, ಸಹಕಾರ ಸಂಘಗಳ ಅಪರ ನಿಬಂಧಕರು ಹಾಗೂ ಸಮನ್ವಯಾಧಿಕಾರಿ ಕೆ.ಎಂ. ಆಶಾ, ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಸ್. ನವೀನ್, ಕಾಸ್ಕಾರ್ಡ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಸಿ. ಸತೀಶ್, ಬೆಂಗಳೂರು ಪ್ರಾಂತ್ಯ ಜಂಟಿ ನಿಬಂಧಕರಾದ ಅಶ್ವತ್ಥನಾರಾಯಣ ಮೊದಲಾದವರು ಉಪಸ್ಥಿತರಿದ್ದರು.

## ದಿನಾಂಕ : 24.11.2023 ರಂದು ಹುಬ್ಬಳ್ಳಿಯಲ್ಲಿ ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ನಿರ್ದೇಶಕ ಮಂಡಳಿ ಸದಸ್ಯರುಗಳಿಗೆ ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿಯವರಿಗೆ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣ

**ಬೆಂಗಳೂರು :** ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳವು ದಿನಾಂಕ : 24ನೇ ನವೆಂಬರ್ 2023ರಂದು ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ನಿರ್ದೇಶಕ ಮಂಡಳಿ ಸದಸ್ಯರುಗಳಿಗೆ ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿಯವರಿಗೆ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣವನ್ನು "ದಿ ಫರ್ನ್ ರೆಸಿಡೆನ್ಸಿ, ಏರ್‌ಪೋರ್ಟ್ ರಸ್ತೆ, ಗೋಕುಲ ರಸ್ತೆ, ಹುಬ್ಬಳ್ಳಿ – 580 030" ಇಲ್ಲಿ ಏರ್ಪಡಿಸಲಾಗಿದೆ.

ಈ ವಿಚಾರ ಸಂಕಿರಣದಲ್ಲಿ ನಿರ್ದೇಶಕ ಮಂಡಳಿಯ ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿಯವರ ಕರ್ತವ್ಯ ಹಾಗೂ ಹೊಣೆಗಾರಿಕೆಗಳು, ಇತ್ತೀಚಿನ ಭಾರತೀಯ ರಿಜರ್ವ್ ಬ್ಯಾಂಕಿನ ನಿರ್ದೇಶನಗಳು, ಡಿಜಿಟಲೈಸಿಂಗ್ ಕೋ–ಆಪರೇಟಿವ್ ಬ್ಯಾಂಕ್ಸ್, ಹೂಡಿಕೆಗಳು (ಸರ್ಕಾರಿ ಭದ್ರತೆ) ವಿಷಯಗಳ ಕುರಿತು ನುರಿತ ಬ್ಯಾಂಕಿಂಗ್ ತಜ್ಞರು ಉಪನ್ಯಾಸ ನೀಡಲಿದ್ದಾರೆ. ಈ ವಿಚಾರ ಸಂಕಿರಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಪುಂಡಲೀಕ ಎನ್. ಕೇರೂರೆಯವರು ಕೋರಿರುತ್ತಾರೆ.


2 ಆರ್‌ಬಿಐನ ನವೆಂಬರ್ ತಿಂಗಳ ಆರ್ಥಿಕ ಪರಾಮರ್ಶೆ ವರದಿ

4 ಸಹಕಾರಿ ನೌಕರರ ಸಹಕಾರಿ ಬ್ಯಾಂಕ ನಿ., ವಿಜಯಪುರ : ನೂತನ ಶಾಖೆಗಳ ಉದ್ಘಾಟನೆ

6 ಆರ್‌ಬಿಐ ಫಿನ್‌ಟೆಕ್ ವಿಭಾಗದ ಮುಖ್ಯಸ್ಥರಾಗಿ ವಾಸುದೇವನ್

## ಸಂಪಾದಕೀಯ

## ಆತ್ಮೀಯ ಸಹಕಾರಿಗಳೇ...



### ದೇಶದ ಆರ್ಥಿಕ ಬೆಳವಣಿಗೆ ಎಂದರೆ, ಕೆಲವೇ ಶ್ರೀಮಂತರ ಬಳಿ ಸಂಪತ್ತಿನ ಕ್ರೋಡೀಕರಣವಲ್ಲ ಎನ್ನುವುದನ್ನು ಅರಿಯಬೇಕಿದೆ

ದೇಶದ ಪ್ರಗತಿಯನ್ನು ಕೇವಲ ಆರ್ಥಿಕ ಬೆಳವಣಿಗೆಯಿಂದ ಅಳೆಯುವ ಪ್ರವೃತ್ತಿ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಕಂಡುಬರುತ್ತಿದೆ. ನಮ್ಮ ದೇಶ ಆರ್ಥಿಕತೆ ಪ್ರಗತಿಯ ಹಾದಿಯಲ್ಲಿರುವುದಾಗಿಯೂ ಜಾಗತಿಕವಾಗಿ ಮೂರನೇ ಸ್ಥಾನದತ್ತ ದಾಪುಗಾಲಿಡುತ್ತಿವೆಂದು ನಮ್ಮ ಅಧಿಕಾರಸ್ಥರು ಹೆಮ್ಮೆಯಿಂದ ಹೇಳುತ್ತಿದ್ದಾರೆ. ಆದರೆ, ಆಕ್ಸ್‌ಫಾಮ್ ಸಂಸ್ಥೆ ಬಹಿರಂಗ ಪಡಿಸಿರುವ ವರದಿಯ ಪ್ರಕಾರ; ಶೇ.52ರಷ್ಟು ಭಾರತೀಯರು ತಮ್ಮ ಆರೋಗ್ಯ ರಕ್ಷಣೆಗಾಗಿ ಮಾಡುಬೇಕಿರುವ ಖರ್ಚು–ವೆಚ್ಚಗಳನ್ನು ಭರಿಸಲಾಗದೆ ತತ್ತರಿಸುತ್ತಿದ್ದಾರೆ ಎನ್ನುತ್ತದೆ. ಬಹುತೇಕ ನಮ್ಮ ಜನಗಳು ತಮ್ಮ ಹಾಗೂ ತಮ್ಮ ಕುಟುಂಬ ಸದಸ್ಯರು ಆರೋಗ್ಯ ಸಮಸ್ಯೆಗೆ ಸಿಲುಕಿದಾಗ ಕೂಡಿಟ್ಟ ಹಣ ಅಥವಾ ಸಾಲ ಮಾಡಿಯೇ ಚಿಕಿತ್ಸೆ ಕೊಡಿಸಬೇಕಿದೆ. ಇದು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ಎದುರಿಸುತ್ತಿರುವ ಸಮಸ್ಯೆಯಾಗಿದೆ. ಇದರ ಪರಿಣಾಮವಾಗಿ, ಒಬ್ಬರ ಅನಾರೋಗ್ಯ ಇಡೀ ಕುಟುಂಬವನ್ನು ತಲ್ಲಣಗೊಳಿಸುತ್ತಿದೆ. ಈ ಕಾರಣಕ್ಕೆ ಪ್ರತಿವರ್ಷ ಆರು ಕೋಟಿಗೂ ಹೆಚ್ಚು ಜನ ಬಡತನಕ್ಕೆ ತಳ್ಳಲ್ಪಡುತ್ತಿದ್ದಾರೆ ಎಂದರೆ ಸಮಸ್ಯೆಯ ಗಂಭೀರತೆಯ ಅರಿವಾಗುತ್ತದೆ.

ನಮ್ಮ ದೇಶದಲ್ಲಿ ಇರುವ ಸಾರ್ವಜನಿಕ ಆರೋಗ್ಯ ಕೇಂದ್ರಗಳು ನಾನಾ ಸಮಸ್ಯೆಗಳಿಂದ ನರಳುತ್ತಿವೆ. ಒಂದೆಡೆ ವೈದ್ಯರ ಕೊರತೆ, ಇನ್ನೊಂದೆಡೆ ಆರೋಗ್ಯ ಸಿಬ್ಬಂದಿಯ ಕೊರತೆ, ಅಗತ್ಯ ಔಷಧಿ–ಮಾತ್ರೆಗಳ, ಆರೋಗ್ಯ ಕೇಂದ್ರಗಳಲ್ಲಿ ಇರಬೇಕಾದ ಯಂತ್ರೋಪಕರಣಗಳ ಕೊರತೆ ಇವೆ. ಈ ಕಾರಣಕ್ಕೆ ಜನ ಖಾಸಗಿ ಆಸ್ಪತ್ರೆಗಳ ಮೊರೆ ಹೋಗಬೇಕಾಗಿದೆ ಹಾಗೂ ಅಲ್ಲಿ ದುಬಾರಿ ಶುಲ್ಕ ತೆರಬೇಕಾಗಿದೆ.

ನಮ್ಮ ದೇಶ ಕೃಷಿ ಪ್ರಧಾನವಾಗಿದೆ ಹಾಗೂ ಅಸಂಘಟಿತ ವಲಯದಲ್ಲಿ ಅಸಂಖ್ಯಾತ ಕಾರ್ಮಿಕರು ಕಡಿಮೆ ವೇತನದೊಂದಿಗೆ ಜೀವನ ಸಾಗಿಸಬೇಕಾಗಿದೆ. ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರದ ವರದಿಯಂತೆ, ದೇಶದಲ್ಲಿ ಅಗತ್ಯ ಪೌಷ್ಟಿಕಾಂಶದ ಕೊರತೆಯಿಂದ ಬಳಲುತ್ತಿರುವ ಶೇ. 50ರಷ್ಟು ಮಕ್ಕಳು ನಮ್ಮಲ್ಲಿದ್ದಾರೆ. ಈ ಸಮಸ್ಯೆಗೆ ಇನ್ನೊಂದು ಕಾರಣ ದೇಶದಲ್ಲಿ ಹೆಚ್ಚುತ್ತಿರುವ ನಿರುದ್ಯೋಗದಿಂದಾಗಿ ಅನೇಕ ಕುಟುಂಬಗಳು ಹಸಿವು ಮತ್ತು ಅಪೌಷ್ಟಿಕತೆಯಿಂದ ನರಳುತ್ತಿವೆ. ಇದು ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಾಗುವ ಸಾಧ್ಯತೆ ಇದೆ.

ಆರ್ಥಿಕ ಬೆಳವಣಿಗೆಯನ್ನು ಒಪ್ಪಿಕೊಂಡರೂ, ಹಲವಾರು ಸಮಸ್ಯೆಗಳು ನಮ್ಮ ದೇಶದ ಮುಂದಿವೆ. ದೇಶದ ಬಹುಸಂಖ್ಯಾತ ಕುಟುಂಬಗಳು ಮೂಲಭೂತ ಅಗತ್ಯ ಆರೋಗ್ಯ ಸೌಲಭ್ಯಗಳಿಂದ ವಂಚಿತವಾಗಿರುವಾಗ, ಹೆಚ್ಚುತ್ತಿರುವ ಹಣದುಬ್ಬರದಿಂದಾಗಿ ಅವರ ಜೀವನ ನಿರ್ವಹಣೆಯೇ ದುಸ್ತರವಾಗಿರುವಾಗ ಆರ್ಥಿಕ ಬೆಳವಣಿಗೆಯಲ್ಲಿ ನಾವು ವಿಶ್ವದಲ್ಲೇ ಮೂರನೆ ಸ್ಥಾನದತ್ತ ಮುನ್ನುಗ್ಗುತ್ತಿದ್ದೇವೆ ಎಂದು ಸಂಭ್ರಮಿಸುವುದಾದರೂ ಹೇಗೆ?

ದೇಶದ ಆರ್ಥಿಕ ಬೆಳವಣಿಗೆ ಎಂದರೆ, ಕೆಲವೇ ಶ್ರೀಮಂತರ ಬಳಿ ಸಂಪತ್ತಿನ ಕ್ರೋಡೀಕರಣವಲ್ಲ ಎನ್ನುವುದನ್ನು ಅರಿಯಬೇಕಿದೆ. ದೇಶದ ನಿಜವಾದ ಆರ್ಥಿಕ ಬೆಳವಣಿಗೆಯಾಗಬೇಕಿದ್ದಲ್ಲಿ ಎಲ್ಲ ನಾಗರಿಕರಿಗೂ ನಿಶ್ಚಿತ ಆದಾಯ ಮತ್ತು ನೆಮ್ಮದಿಯ ಆರೋಗ್ಯಕರ ಜೀವನ ನಡೆಸುವಂತಾಗುವುದು ಎಂದು ನಾನು ಭಾವಿಸಿದ್ದೇನೆ.

ಜನರ ನಿತ್ಯ ಜೀವನವೇ ಅನಿಶ್ಚತೆಯಿಂದ ಕೂಡಿರುವಾಗ ದೇಶದ ಆರ್ಥಿಕ ಪ್ರಗತಿಯ ಬಗ್ಗೆ ನಾವು ಹೆಮ್ಮೆ ಪಡುವುದಾದರೂ ಹೇಗೆ? ಆರ್ಥಿಕ ಬೆಳವಣಿಗೆಯಲ್ಲಿ ದೇಶ ಮುನ್ನಡೆಯುತ್ತಿದೆ ಆದರೆ ಕಾಲುಗಳು ದುರ್ಬಲವಾಗಿ ಕುಸಿಯುತ್ತಿರುವಂತೆ ನನಗೆ ಕಾಣಿಸುತ್ತಿದೆ.

▸▸ ಎಚ್.ಕೆ. ಪಾಟೀಲ

## ಆರ್‌ಬಿಐನ ನವೆಂಬರ್ ತಿಂಗಳ ಆರ್ಥಿಕ ಪರಾಮರ್ಶೆ ವರದಿ

**ಮುಂಬೈ** : ಕಳೆದ ಎರಡು ತಿಂಗಳಿನಿಂದ ಚಿಲ್ಲರೆ ಹಣದುಬ್ಬರವು ಇಳಿಮುಖ ಆಗಿದೆ. ಆದರೆ, ಹಣದುಬ್ಬರವನ್ನು ನಿರ್ವಹಿಸುವ ಸಮಸ್ಯೆಯಿಂದ ನಾವಿನ್ನೂ ಹೊರಬಂದಿಲ್ಲ. ಇನ್ನೂ ಬಹಳಷ್ಟು ದೂರ ಸಾಗಬೇಕಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್‌ನ (ಆರ್‌ಬಿಐ) ವರದಿ ಹೇಳಿದೆ.

ಹಣಕಾಸು ನೀತಿ ಮತ್ತು ಪೂರೈಕೆ ವ್ಯವಸ್ಥೆಯಲ್ಲಿ ಮಧ್ಯಪ್ರವೇಶ ಮಾಡಿರುವುದೇ ಹಣದುಬ್ಬರವು ಇಳಿಮುಖ ಆಗಿದೆ ಎಂದು ಬಿಡುಗಡೆ ಮಾಡಿರುವ ನವೆಂಬರ್ ತಿಂಗಳ ಆರ್ಥಿಕ ಪರಿಶೀಲನಾ ವರದಿಯಲ್ಲಿ ತಿಳಿಸಿದೆ.

ಆರ್‌ಬಿಐ ಡೆಪ್ಯುಟಿ ಗವರ್ನರ್ ಮೈಕಲ್ ಅವರ ನೇತೃತ್ವದ ತಂಡವು ಈ ವರದಿ ಸಿದ್ಧಪಡಿಸಿದೆ. ಚಿಲ್ಲರೆ ಹಣದುಬ್ಬರವು 2022–23ರಲ್ಲಿ ಸರಾಸರಿ ಶೇ.6.7 ಮತ್ತು 2023ರ ಜುಲೈ – ಆಗಸ್ಟ್‌ನಲ್ಲಿ ಶೇ.7.1ರಷ್ಟು ಇತ್ತು. ಇದಕ್ಕೆ ಹೋಲಿಸಿದರೆ ಸೆಪ್ಟೆಂಬರ್‌ನಲ್ಲಿ ಶೇ.5.02ಕ್ಕೆ ಇಳಿಕೆ ಕಂಡಿದೆ. ಅಕ್ಟೋಬರ್‌ನಲ್ಲಿ ನಾಲ್ಕು ತಿಂಗಳ ಕನಿಷ್ಠ ಮಟ್ಟವಾದ ಶೇ.4.87ಕ್ಕೆ ಇಳಿಕೆ ಕಂಡಿದೆ. ಇದು ತುಸು ನೆಮ್ಮದಿ ತಂದಿದೆ. ಹೀಗಿದ್ದರೂ ಹಣದುಬ್ಬರದ ಸಮಸ್ಯೆಯು ಸಂಪೂರ್ಣವಾಗಿ ಬಗೆಹರಿದಿಲ್ಲ ಎಂದು ತಿಳಿಸಿದೆ.

ಹಣಕಾಸು ನೀತಿ ಸಮಿತಿಯು (ಎಂಪಿಸಿ) ಅಕ್ಟೋಬರ್ ಸಭೆಯಲ್ಲಿ 2023–24ರಲ್ಲಿ ಚಿಲ್ಲರೆ ಹಣದುಬ್ಬರವು ಶೇ.5.4ರಷ್ಟು ಇರುವ ಅಂದಾಜು ಮಾಡಿದೆ. ಆದರೆ, ಆಹಾರ ದರ ಏರಿಕೆಯಿಂದ ಒಟ್ಟಾರೆ ಹಣದುಬ್ಬರದ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ. ಹೀಗಾಗಿ ಹಣದುಬ್ಬರವನ್ನು ಗುರಿಯೊಳಗೆ ನಿಯಂತ್ರಿಸಲು ಮತ್ತು ಆರ್ಥಿಕ ಬೆಳವಣಿಗೆಗೆ ಬೆಂಬಲ ನೀಡುವುದರತ್ತ ಹೆಚ್ಚು ಗಮನ ಹರಿಸಬೇಕಾಗಿದೆ. ಹಬ್ಬದ ಬೇಡಿಕೆಯು ಉತ್ತಮವಾಗಿ ಇರುವುದರಿಂದ ಭಾರತದಲ್ಲಿ ಜಿಡಿಪಿ ಬೆಳವಣಿಗೆಯು 2023–24ರ ಮೂರನೇ ತ್ರೈಮಾಸಿಕದಲ್ಲಿ ಹೆಚ್ಚಿಗೆ ಇರುವ ನಿರೀಕ್ಷೆ ಇದೆ. ತಯಾರಿಕಾ ವಲಯದ ನಿಧಾನಗತಿಯ ಬೆಳವಣಿಗೆಯು ಜಾಗತಿಕ ಆರ್ಥಿಕತೆ ಬೆಳವಣಿಗೆಯು ಇಳಿಮುಖ ಆಗುವ ಸೂಚನೆಯನ್ನು ನೀಡುತ್ತಿದೆ. ಆದರೆ, ಸೇವಾ ವಲಯದ ಚಟುವಟಿಕೆಯು ಕೋವಿಡ್‌ಗೂ ಮುಂಚಿನ ಮಟ್ಟವನ್ನು ತಲುಪಿರುವಂತೆ ಕಾಣುತ್ತಿದೆ ಎಂದು ವರದಿಯಲ್ಲಿ ಹೇಳಲಾಗಿದೆ.

# 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ

## ಸಹಕಾರಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿ : ಸಚಿವ ಶರಣಪ್ರಕಾಶ್ ಆರ್. ಪಾಟೀಲ



**ರಾಯಚೂರು :** ಪ್ರಾಮಾಣಿಕತೆ, ನಿಸ್ವಾರ್ಥತೆ ಹಾಗೂ ಸಮಾಜದ ಬಗ್ಗೆ ಕಳಕಳಿ ಹೊಂದಿದಾಗ ಮಾತ್ರ ಸಹಕಾರಿ ಕ್ಷೇತ್ರ ಬೆಳೆಯಲು ಸಾಧ್ಯವಾಗುತ್ತದೆ. ಸಹಕಾರಿ ಕ್ಷೇತ್ರದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ ಹೇಳಿದರು.

ದಿನಾಂಕ: 15.11.2023ರಂದು ರಾಯಚೂರ ಕೃಷಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ, ರಾಜ್ಯ ಸಹಕಾರ ಕುರಿ ಮತ್ತು ಮೇಕೆ ಸಾಕಾಣಿಕೆದಾರರ ಮಹಾಮಂಡಳ, ರಾಯಚೂರು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ಜಿಲ್ಲೆಯ ಪಟ್ಟಣ ಸಹಕಾರ ಬ್ಯಾಂಕುಗಳು ಮತ್ತು ಪತ್ತಿನ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಹಕಾರ ಕ್ಷೇತ್ರ ಬಹಳ ದೊಡ್ಡ ವ್ಯಾಪ್ತಿ ಹೊಂದಿದೆ. ಎಲ್ಲ ಚಟುವಟಿಕೆಗಳಲ್ಲಿ ಸಹಕಾರಿ ಕ್ಷೇತ್ರಗಳನ್ನು ಸ್ಥಾಪಿಸುವ ಮೂಲಕ ಪ್ರತಿಯೊಬ್ಬರೂ ತಮ್ಮನ್ನು ತಾವು ತೊಡಗಿಸಿಕೊಳ್ಳಲು ಸಾಧ್ಯವಾಗುತ್ತದೆ. ಮೊದಲ ಬಾರಿಗೆ ಗದಗಿನಲ್ಲಿ ಪ್ರಾರಂಭವಾದ ಸಹಕಾರ ಚಳುವಳಿ ಇದೀಗ ದೇಶಾದ್ಯಂತ ಬೆಳೆದಿದೆ ಎಂದರು.

ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು ಮಾತನಾಡಿ ರಾಜ್ಯದಲ್ಲಿರುವ ಸಹಕಾರ ಸಂಘಗಳು ಕೆಲವೇ ವರ್ಷಗಳಲ್ಲಿ ಹೆಚ್ಚಿನ ಸದಸ್ಯರನ್ನು ಹೊಂದುವ ಮೂಲಕ ಉತ್ತಮ ಸಾಧನೆ ತೋರಿವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಸದಸ್ಯತ್ವ ನೋಂದಣಿಗೆ ಮುಂದಾಗಬೇಕು ಎಂದರು.

ಸಹಕಾರಿ ಕ್ಷೇತ್ರದಲ್ಲಿ ಸಾಧನೆ ಮಾಡಿದ ನಾನಾ ಸಹಕಾರಿ ಸಂಘಗಳು, ಮಹಾಮಂಡಳಗಳು ಹಾಗೂ ನಿಯಮಿತಗಳ ಸದಸ್ಯರು ಹಾಗೂ ಸಹಕಾರಿಗಳನ್ನು ಸನ್ಮಾನಿಸಲಾಯಿತು.

ಶಾಸಕರಾದ ಹಂಪನಗೌಡ ಬಾದರ್ಲಿ, ಜಿ. ಹಂಪಯ್ಯ ನಾಯಕ, ಬಸನಗೌಡ ದದ್ದಲ್, ಶ್ರೀಮತಿ ಕರೆಮ್ಮ ಜಿ. ನಾಯಕ, ಶರಣಗೌಡ ಪಾಟೀಲ ಬಯ್ಯಾಪುರ, ಕೆಓಎಫ್ ಅಧ್ಯಕ್ಷ ವೆಂಕಟರಾವ್ ನಾಡಗೌಡ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನಗೌಡ, ಕರ್ನಾಟಕ ರಾಜ್ಯ ಮಹಿಳಾ ಮಹಾಮಂಡಳದ ಅಧ್ಯಕ್ಷೆ ಶಕುಂತಲಾ ಬೆಲ್ದಾಳೆ, ಕೆಓಎಫ್ ಉಪಾಧ್ಯಕ್ಷ ಮಹಾಂತೇಶ ಪಾಟೀಲ ಅತ್ತನೂರು, ರಾಯಚೂರು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷ ವಿಶ್ವನಾಥ ಪಾಟೀಲ ತೋರಣದಿನ್ನಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಶೇಖರ್‌ಗೌಡ ಮಾಲಿಪಾಟೀಲ, ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಪುಂಡಲೀಕ ಎನ್. ಕೇರೂರೆ ಮತ್ತಿತರರು ಉಪಸ್ಥಿತರಿದ್ದರು.



# ಸಹಕಾರಿ ನೌಕರರ ಸಹಕಾರಿ ಬ್ಯಾಂಕ ನಿ., ವಿಜಯಪುರ : ನೂತನ ಶಾಖೆಗಳ ಉದ್ಘಾಟನೆ

ದಿನಾಂಕ : 19/08/2023 ರಂದು ನಡೆದ ಚಡಚಣ ಶಾಖೆಯ ಉದ್ಘಾಟನಾ ಸಮಾರಂಭಕ್ಕೆ ಪ.ಪೂ.ಶ್ರೀ ಅಮೃತಾನಂದ ಸ್ವಾಮಿಜಿಗಳು ಗುರುದೇವ ಆಶ್ರಮ ಬಾಲಗಾಂವ ಇವರು ದಿವ್ಯ ಸಾನಿಧ್ಯದಲ್ಲಿ, ಶ್ರೀ ವಿಠ್ಠಲ ಧೋ ಕಟಕದೊಂಡ ಮಾನ್ಯ ಶಾಸಕರು ನಾಗಠಾಣ ಮತಕ್ಷೇತ್ರ ಇವರಿಂದ ಕಾರ್ಯಕ್ರಮ ಉದ್ಘಾಟನೆಯಾಯಿತು ವಿಜಯಪುರ ಜಿಲ್ಲೆಯ ಉಪನಿಬಂಧಕರಾದ ಶ್ರೀಮತಿ ಎಸ್.ಕೆ. ಭಾಗ್ಯಶ್ರೀ ಹಾಗೂ ಚಡಚಣ ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳು ಅತಿಥಿಗಳಾಗಿ ಭಾಗವಹಿಸಿದ್ದರು. ಬ್ಯಾಂಕಿನ ಅಧ್ಯಕ್ಷರಾದ ಪ್ರಶಾಂತ ಚನಗೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು, ಮತ್ತು ಬ್ಯಾಂಕಿನ ಉಪಾಧ್ಯಕ್ಷರು, ಎಲ್ಲಾ ನಿರ್ದೇಶಕರು, ಪ್ರಧಾನ ವ್ಯವಸ್ಥಾಪಕರು, ಸದಸ್ಯರು ಮತ್ತು ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.





ದಿನಾಂಕ : 29/08/2023 ರಂದು ನಡೆದ ತಾಳಿಕೋಟೆ ಶಾಖೆಯ ಉದ್ಘಾಟನಾ ಸಮಾರಂಭಕ್ಕೆ ಪ.ಪೂ.ಶ್ರೀ.ಷ.ಬ್ರ. ಗುರುಜಯ ಸಿದ್ದೇಶ್ವರ ಮಹಾಸ್ವಾಮಿಗಳು ಅನ್ನದಾನೇಶ್ವರ ಸಂಸ್ಥಾನ, ಹಿರೇಮಠ, ಹಿರೂರ ಇವರು ದಿವ್ಯ ಸಾನಿಧ್ಯದಲ್ಲಿ, ಶ್ರೀ ಅಪ್ಪಾಜಿ ಸಿ.ಎಸ್. ನಾಡಗೌಡ ಮಾನ್ಯ ಶಾಸಕರು ಮುದ್ದೇಬಿಹಾಳ ಮತಕ್ಷೇತ್ರ ಕಾರ್ಯಕ್ರಮ ಉದ್ಘಾಟಿಸಿದರು, ಶ್ರೀ ಅಶೋಕ ಎಂ. ಮನಗೂಳಿ ಮಾನ್ಯ ಶಾಸಕರು ಸಿಂದಗಿ ಮತಕ್ಷೇತ್ರ ಬ್ಯಾಂಕಿನ ಸೌಲಭ್ಯಗಳನ್ನು ಉದ್ಘಾಟಿಸಿದರು, ವಿಜಯಪುರ ಜಿಲ್ಲೆಯ ಉಪನಿಬಂಧಕರಾದ ಶ್ರೀಮತಿ ಎಸ್.ಕೆ. ಭಾಗ್ಯಶ್ರೀ ಹಾಗೂ ತಾಳಿಕೋಟಿ ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳು ಅತಿಥಿಗಳಾಗಿ ಭಾಗವಹಿಸಿದ್ದರು. ಬ್ಯಾಂಕಿನ ಅಧ್ಯಕ್ಷರಾದ ಪ್ರಶಾಂತ ಚನಗೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು ಮತ್ತು ಬ್ಯಾಂಕಿನ ಉಪಾಧ್ಯಕ್ಷರು, ಎಲ್ಲಾ ನಿರ್ದೇಶಕರು, ಸದಸ್ಯರು, ಪ್ರಧಾನ ವ್ಯವಸ್ಥಾಪಕರು ಮತ್ತು ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

ದಿನಾಂಕ 02/09/2023 ರಂದು ನಡೆದ ರಬಕವಿ–ಬನಹಟ್ಟಿ ಶಾಖೆಯ ಉದ್ಘಾಟನಾ ಸಮಾರಂಭಕ್ಕೆ ಪ.ಪೂ.ಶ್ರೀ ಗುರು ಸಿದ್ದೇಶ್ವರ ಮಹಾಸ್ವಾಮಿಗಳು ಗುರುದೇವ ಬ್ರಹ್ಮಾನಂದ ಆಶ್ರಮ ರಬಕವಿ ಇವರು ದಿವ್ಯ ಸಾನಿಧ್ಯ ವಹಿಸಿ ಕಾರ್ಯಕ್ರಮ ಉದ್ಘಾಟಿಸಿದರು, ರಬಕವಿ–ಬನಹಟ್ಟಿ ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳು ಅತಿಥಿಗಳಾಗಿ ಭಾಗವಹಿಸಿದ್ದರು. ಬ್ಯಾಂಕಿನ ಅಧ್ಯಕ್ಷರಾದ ಪ್ರಶಾಂತ ಚನಗೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು ಮತ್ತು ಬ್ಯಾಂಕಿನ ಉಪಾಧ್ಯಕ್ಷರು, ಎಲ್ಲಾ ನಿರ್ದೇಶಕರು, ಪ್ರಧಾನ ವ್ಯವಸ್ಥಾಪಕರು, ಸದಸ್ಯರು ಮತ್ತು ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.





ದಿನಾಂಕ : 30/09/2023 ರಂದು ನಡೆದ ಹುನಗುಂದ ಶಾಖೆಯ ಉದ್ಘಾಟನಾ ಸಮಾರಂಭಕ್ಕೆ ಪ.ಪೂ.ಶ್ರೀ ಮ.ನಿ.ಪ್ರ. ಗುರು ಮಹಾಂತ ಮಹಾಸ್ವಾಮಿಗಳು ಚಿತ್ತರಗಿ, ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠ, ಇಳಕಲ ಇವರು ದಿವ್ಯ ಸಾನಿಧ್ಯದಲ್ಲಿ ಕಾರ್ಯಕ್ರಮ ಉದ್ಘಾಟನೆಯಾಯಿತು, ಹುನಗುಂದ ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳು ಅತಿಥಿಗಳಾಗಿ ಭಾಗವಹಿಸಿದ್ದರು, ಬ್ಯಾಂಕಿನ ಅಧ್ಯಕ್ಷರಾದ ಪ್ರಶಾಂತ ಚನಗೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು ಮತ್ತು ಬ್ಯಾಂಕಿನ ಉಪಾಧ್ಯಕ್ಷರು, ಎಲ್ಲಾ ನಿರ್ದೇಶಕರು, ಪ್ರಧಾನ ವ್ಯವಸ್ಥಾಪಕರು, ಸದಸ್ಯರು ಮತ್ತು ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

ದಿನಾಂಕ : 04/11/2023 ರಂದು ನಡೆದ ಬಾದಾಮಿ ಶಾಖೆಯ ಉದ್ಘಾಟನಾ ಸಮಾರಂಭಕ್ಕೆ ಪ.ಪೂ.ಶ್ರೀ ಅಭಿನವ ಒಪ್ಪತ್ತೇಶ್ವರ ಮಹಾಸ್ವಾಮಿಗಳು ಒಪ್ಪತ್ತೇಶ್ವರ ಮಠ ಗುಳೇದಗುಡ್ಡ ಇವರ ದಿವ್ಯ ಸಾನಿಧ್ಯದಲ್ಲಿ, ಶ್ರೀ ಭೀಮಸೇನ ಬಿ. ಚಿಮ್ಮನಕಟ್ಟಿ ಮಾನ್ಯ ಶಾಸಕರು ಬಾದಾಮಿ ಮತಕ್ಷೇತ್ರ ಕಾರ್ಯಕ್ರಮ ಉದ್ಘಾಟಿಸಿದರು, ಶ್ರೀಮತಿ ಮೀನಾಕ್ಷಿ ಗಡ ಪ್ರಧಾನ ವ್ಯವಸ್ಥಾಪಕರು, ಆರ್.ಬಿ.ಆಯ್. ಬೆಂಗಳೂರು ಇವರು ಜ್ಯೋತಿ ಬೆಳಗಿಸಿದರು, ಬಾದಾಮಿ ಹಾಗೂ ಗುಳೆದಗುಡ್ಡ ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳು ಅತಿಥಿಗಳಾಗಿ ಭಾಗವಹಿಸಿದ್ದರು, ಬ್ಯಾಂಕಿನ ಅಧ್ಯಕ್ಷರಾದ ಪ್ರಶಾಂತ ಚನಗೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು ಮತ್ತು ಬ್ಯಾಂಕಿನ ಉಪಾಧ್ಯಕ್ಷರು, ಎಲ್ಲಾ ನಿರ್ದೇಶಕರು, ಪ್ರಧಾನ ವ್ಯವಸ್ಥಾಪಕರು, ಸದಸ್ಯರು, ಮತ್ತು ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.



## ದಿ ದಾವಣಗೆರೆ ಅರ್ಬನ್ ಕೋ-ಆಪರೇಟಿವ್ ಬ್ಯಾಂಕಿಗೆ ಬ್ಯಾಂಕೋ ಬ್ಲೂ ರಿಬ್ಬನ್ ಪ್ರಶಸ್ತಿ



ಅವಿಸ್ ಪಬ್ಲಿಕೇಷನ್, ಕೊಲ್ಹಾಪುರ ಇವರು ಪ್ರತಿವರ್ಷ ದೇಶದಲ್ಲಿನ ಸಹಕಾರ ಬ್ಯಾಂಕ್‌ಗಳನ್ನು ಮೂರು ವರ್ಗಗಳಲ್ಲಿ ವಿಂಗಡಿಸಿ ಪ್ರತಿ ವರ್ಗದಲ್ಲಿ ಅತ್ಯುನ್ನತ ಸಹಕಾರಿ ಬ್ಯಾಂಕ್‌ನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿದ್ದು, ಈ ಸಾಲಿನಲ್ಲಿ ರೂ.400 ರಿಂದ 500 ಕೋಟಿ ಠೇವಣಿ ಹೊಂದಿರುವ ದೇಶದಲ್ಲಿನ ಸಹಕಾರ ಬ್ಯಾಂಕ್‌ಗಳಲ್ಲಿ "ದಿ ದಾವಣಗೆರೆ ಅರ್ಬನ್ ಕೋ-ಆಪ್ ಬ್ಯಾಂಕ್"ನ್ನು ಅತ್ಯುನ್ನತ ಸಾಧನೆಗೈದ ಬ್ಯಾಂಕ್ ಎಂದು ಗುರುತಿಸಿದ್ದು, ದಿನಾಂಕ : 04.10.2023 ರಿಂದ ದಿನಾಂಕ : 06.10.2023ರವರೆಗೆ ದಮನ್‌ನಲ್ಲಿ ನಡೆದ "ರಾಷ್ಟ್ರೀಯ ಸಹಕಾರ ಸಮ್ಮೇಳನ-2023" "Banco Blue Ribbon 2023 Honour" ಪ್ರತಿಷ್ಠಿತ ಪ್ರಶಸ್ತಿಯನ್ನು ತನ್ನ ಮುಡಿಗೇರಿಸಿಕೊಂಡಿದೆ.

ಸಹಕಾರ ರಂಗದಲ್ಲಿ ಹೊಸ ಆವಿಷ್ಕಾರದೊಂದಿಗೆ ಉತ್ತಮ ಬ್ಯಾಂಕಿಂಗ್ ಸೇವೆ ಮತ್ತು ಡಿಜಿಟಲ್ ಬ್ಯಾಂಕಿಂಗ್ ಸೇವೆಗಳನ್ನು ನೀಡುತ್ತಾ ಬಂದಿದ್ದು ಹಾಗೂ ದಾವಣಗೆರೆ ಜಿಲ್ಲೆಯಲ್ಲಿಯೇ ಜನರ ಪ್ರಥಮ ಆದ್ಯತೆಯ ಸಹಕಾರ ಬ್ಯಾಂಕ್ ಆಗಿದ್ದು, ಈಗ ರಾಷ್ಟ್ರೀಯ ಮಟ್ಟದಲ್ಲಿಯೂ ಸಹ ಗುರುತಿಸಿಕೊಂಡಿದೆ. ದಾವಣಗೆರೆ ಜಿಲ್ಲೆಯಲ್ಲಿಯೆ ಈ ಪ್ರಶಸ್ತಿಯನ್ನು ಪಡೆದ ಮೊದಲ ಸಹಕಾರ ಬ್ಯಾಂಕ್ ಎಂಬ ಹೆಗ್ಗಳಿಕೆಗೆ "ದಿ ದಾವಣಗೆರೆ ಅರ್ಬನ್ ಕೋ-ಆಪ್ ಬ್ಯಾಂಕ್" ಭಾಜನವಾಗಿದೆ. ಈ ಅತ್ಯುನ್ನತ ಸಾಧನೆಗೆ ಸಹಕರಿಸಿದ ಬ್ಯಾಂಕಿನ ಎಲ್ಲಾ ಸದಸ್ಯರಿಗೂ, ಗ್ರಾಹಕರಿಗೂ, ಠೇವಣಿದಾರರಿಗೂ, ಬ್ಯಾಂಕಿನ ಕಾರ್ಯನಿರ್ವಾಹಕ ಮಂಡಳಿ ಸದಸ್ಯರಿಗೂ, ವ್ಯವಸ್ಥಾಪನಾ ಮಂಡಳಿ ಸದಸ್ಯರಿಗೂ, ಸಿಬ್ಬಂದಿ ವರ್ಗದವರಿಗೂ ಹಾಗೂ ಲಕ್ಷ್ಮೀ ಠೇವಣಿ ಸಂಗ್ರಹಕಾರರಿಗೂ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಕೋಗುಂಡಿ ಬಕ್ಕೇಶಪ್ಪನವರು ಹೃತ್ಪೂರ್ವಕ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

## ತಾಂತ್ರಿಕ ದೋಷದಿಂದ ಯುಕೊ ಬ್ಯಾಂಕ್ ಖಾತೆದಾರರಿಗೆ 820 ಕೋಟಿ ರೂಪಾಯಿ ಜಮೆ!

**ನವದೆಹಲಿ :** ದೇಶದ ಬ್ಯಾಂಕ್‌ಗಳಲ್ಲಿ ಒಂದಾದ ಯುಕೊ ಬ್ಯಾಂಕ್ ಖಾತೆದಾರರ ಖಾತೆಗೆ ಸುಮಾರು 820 ಕೋಟಿ ರೂಪಾಯಿ ತಾಂತ್ರಿಕ ದೋಷದಿಂದ ಜಮೆಯಾಗಿದೆ ಎಂದು ಬ್ಯಾಂಕ್ ತಿಳಿಸಿದ್ದು ಅದನ್ನು ಈಗ ಹಿಂಪಡೆಯಲಾಗುತ್ತಿದೆ.

ಇದುವರೆಗೆ ಕೇವಲ 649 ಕೋಟಿ ಅಂದರೆ ಶೇ.79ರಷ್ಟು ಹಣ ವಾಪಸ್ ಬಂದಿದೆ ಎಂದು ಯುಕೊ ಬ್ಯಾಂಕ್ ಹೇಳಿದೆ. ಈ ಹಣವನ್ನು ಬ್ಯಾಂಕ್‌ನ ಕೆಲವು ಖಾತೆಗಳಲ್ಲಿ ತಕ್ಷಣದ ಪಾವತಿ ವ್ಯವಸ್ಥೆ (ಐಎಂಪಿಎಸ್) ಮೂಲಕ ತಪ್ಪಾಗಿ ಜಮಾ ಮಾಡಲಾಗಿದೆ ಎಂದು ಬ್ಯಾಂಕ್ ಹೇಳಿದೆ.

ವಿವಿಧ ಪೂರ್ವಭಾವಿ ಕ್ರಮಗಳನ್ನು ತೆಗೆದುಕೊಳ್ಳುವ ಮೂಲಕ ಬ್ಯಾಂಕ್ ಹಣ ಜಮೆಯಾಗಿರುವ ಖಾತೆಗಳನ್ನು ನಿರ್ಬಂಧಿಸಿದೆ. ಇನ್ನು ಪ್ರಸ್ತುತ 820 ಕೋಟಿಗಳಲ್ಲಿ 649 ಕೋಟಿಗಳನ್ನು ಮರುಪಡೆಯಲು ಸಾಧ್ಯವಾಯಿತು ಎಂದು ಯುಕೋ ಬ್ಯಾಂಕ್ ಇಂದು ನಿಯಂತ್ರಕ ಫೈಲಿಂಗ್‌ನಲ್ಲಿ ತಿಳಿಸಿದೆ. ಇದು ಮೊತ್ತದ ಸುಮಾರು 79 ಪ್ರತಿಶತವಾಗಿದೆ. ಆದರೆ, ಇದು ತಾಂತ್ರಿಕ ದೋಷವೋ ಅಥವಾ ಬ್ಯಾಂಕ್ ಹ್ಯಾಕ್ ಮಾಡುವ ಯತ್ನವೋ ಎಂಬುದನ್ನು ಹೇಳಲು ಬ್ಯಾಂಕ್‌ಗೆ ಇದುವರೆಗೂ ಸಾಧ್ಯವಾಗಿಲ್ಲ.

**ಉಳಿದ ಮೊತ್ತವನ್ನು ವಸೂಲಿ ಮಾಡಲು ಕ್ರಮ :** UCO ಬ್ಯಾಂಕ್ ಉಳಿದ 171 ಕೋಟಿ ರೂಪಾಯಿಗಳನ್ನು ಮರುಪಡೆಯಲು ಅಗತ್ಯವಾದ ಕ್ರಮವನ್ನು ಪ್ರಾರಂಭಿಸಿದೆ, ಅಗತ್ಯ ಕ್ರಮಕ್ಕಾಗಿ ಕಾನೂನು ಜಾರಿ ಸಂಸ್ಥೆಗಳಿಗೂ ಈ ವಿಷಯದಲ್ಲಿ ತಿಳಿಸಲಾಗಿದೆ. ನವೆಂಬರ್ 10-13ರ ಅವಧಿಯಲ್ಲಿ, IMPS ನಲ್ಲಿನ ತಾಂತ್ರಿಕ ಸಮಸ್ಯೆಯಿಂದಾಗಿ ಖಾತೆದಾರರ ಖಾತೆಗೆ ರಸೀದಿಯಿಲ್ಲದೆ ಹಣ ಕ್ರೆಡಿಟ್ ಆಗಿರುವುದನ್ನು ಬ್ಯಾಂಕ್ ಗಮನಿಸಿದೆ.

**IMPS ಅನ್ನು NPCI ನಿರ್ವಹಣೆ :** IMPS ಪ್ಲಾಟ್‌ಫಾರ್ಮ್ ಅನ್ನು ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ (NPCI) ನಿರ್ವಹಿಸುತ್ತದೆ. IMPS ಒಂದು ನೈಜ ಸಮಯದ ಅಂತರಬ್ಯಾಂಕ್ ಎಲೆಕ್ಟ್ರಾನಿಕ್ ಹಣ ವರ್ಗಾವಣೆ ವ್ಯವಸ್ಥೆಯಾಗಿದ್ದು ಅದು ಯಾವುದೇ ಹಸ್ತಕ್ಷೇಪವಿಲ್ಲದೆ ಹಣವನ್ನು ಕಳುಹಿಸಲು ಅನುಕೂಲವಾಗುತ್ತದೆ.

# ಟಿಎಂಸಿ ಬ್ಯಾಂಕ್‌ನ 60ನೇ ವಾರ್ಷಿಕೋತ್ಸವ: ಡಿಜಿಟಲ್ ಬ್ಯಾಂಕಿಂಗ್ ಸೇವೆಗೆ ಕ್ರಮ



**ದೊಡ್ಡಬಳ್ಳಾಪುರ :** ದೊಡ್ಡಬಳ್ಳಾಪುರದ ಗಾಂಧಿನಗರದಲ್ಲಿರುವ ದಿ ಟೆಕ್ಸ್‌ಟೈಲ್ ಮ್ಯಾನುಫ್ಯಾಕ್ಚರರ್ಸ್ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ಮೊಬೈಲ್ ಬ್ಯಾಂಕಿಂಗ್ ಅಳವಡಿಕೆ ಹಾಗೂ ಡಿಜಿಟಲೀಕರಣ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಬ್ಯಾಂಕಿನ ಅಧ್ಯಕ್ಷ ಕೆ.ಪಿ. ವಾಸುದೇವ ತಿಳಿಸಿದರು. ಟೆಕ್ಸ್‌ಟೈಲ್ ಮ್ಯಾನುಫ್ಯಾಕ್ಚರರ್ಸ್ ಕೋ-ಆಪರೇಟಿವ್ ಬ್ಯಾಂಕ್ ವತಿಯಿಂದ ಬ್ಯಾಂಕಿನ ಕೆ.ಸಿ.ಪುಟ್ಟಯ್ಯ ಸಭಾಭವನದಲ್ಲಿ 13.11.2023ರಂದು ನಡೆದ 60ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದಶಕಗಳ ಹಿಂದೆ ಬ್ಯಾಂಕ್‌ಗೆ ಆಗಿದ್ದ ಆರ್ಥಿಕ ನಷ್ಟ, ಕೋವಿಡ್ ಸಂದರ್ಭದಲ್ಲಿ ಬ್ಯಾಂಕ್ ನಡೆಸುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಿ ಇಂದು ಟಿಎಂಸಿ ಬ್ಯಾಂಕ್ ಲಾಭದಾಯಕವಾಗಿ ನಡೆಯುತ್ತಿದೆ. ಈ ದಿಸೆಯಲ್ಲಿ ಹಲವು ನಾಗರಿಕರ ಅಪೇಕ್ಷೆ ಮೇರೆಗೆ ಬ್ಯಾಂಕ್‌ನ ನೂತನ ಶಾಖೆ ತೆರೆಯಲು ಉದ್ದೇಶಿಸಿದೆ. ಇದಕ್ಕೆ ಭಾರತೀಯ ರಿಸರ್ವ್ ಬ್ಯಾಂಕ್ ಸೂಚಿಸಿರುವ 7 ಅಂಶಗಳ ಅರ್ಹತೆಯನ್ನು ಬ್ಯಾಂಕ್ ಹೊಂದಿದ್ದು, ದೊಡ್ಡಬಳ್ಳಾಪುರ ತಾಲೂಕಿನಲ್ಲಿ ಹೊಸ ಶಾಖೆ ತೆರೆಯಲಾಗುವುದು. ಬ್ಯಾಂಕ್‌ನ ಡಿಜಿಟಲೀಕರಣ ಮಾಡಲು ಒತ್ತು ನೀಡಲಾಗುತ್ತಿದ್ದು, ಯುಪಿಐ ಪಾವತಿ, ಕೋರ್‌ಬ್ಯಾಂಕಿಂಗ್ ಮೊದಲಾದ ಸೌಲಭ್ಯಗಳನ್ನು ನೀಡಲು ಪ್ರಯತ್ನಿಸಲಾಗುತ್ತಿದೆ ಎಂದರು.

ಟಿಎಂಸಿ ಬ್ಯಾಂಕ್ ನೇಕಾರರ ನೆಚ್ಚಿನ ಬ್ಯಾಂಕ್ ಎನ್ನುವ ಹೆಸರು ಪಡೆದಿದ್ದು, ನೇಕಾರರಿಗೆ ಈಗ ಸಾಲ ನೀಡಲಾಗುತ್ತಿದೆ. ಮಗ್ಗದ ಮೇಲೆ 5ಲಕ್ಷ ರೂ.ವರೆಗೆ ಸಾಲ ನೀಡಲಾಗುತ್ತಿದೆ. ಇದರೊಂದಿಗೆ ಶೈಕ್ಷಣಿಕ ಸಾಲ, ಉದ್ಯೋಗಸ್ಥ ಮಹಿಳೆಯರಿಗೆ ಸಾಲ, ಬೆಳ್ಳಿ, ಚಿನ್ನದ ಸಾಲ ಸೇರಿದಂತೆ ನೀಡಲಾಗುವ ವಿವಿಧ ಸಾಲ ಸೌಲಭ್ಯ ನೀಡಲಾಗುತ್ತಿದೆ ಎಂದರು. ಬ್ಯಾಂಕ್ ಮತ್ತಷ್ಟು ಸದೃಢವಾಗಿ ಬೆಳೆಯಲು ಸದಸ್ಯರ ಸಹಕಾರ ಅಗತ್ಯ. ಸದಸ್ಯರು ತಮ್ಮ ಸದಸ್ಯತ್ವದ ನಿಯಮ ಪಾಲಿಸುವುದರೊಂದಿಗೆ ಹೆಚ್ಚಿನ ಹಣವನ್ನು ಬ್ಯಾಂಕ್‌ನ ವಹಿವಾಟುಗಳಲ್ಲಿ ತೊಡಗಿಸಿ ಬ್ಯಾಂಕ್ ಮತ್ತಷ್ಟು ಏಳಿಗೆಯಾಗುವಂತೆ ಸಹಕರಿಸಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಬ್ಯಾಂಕಿನ ಉಪಾಧ್ಯಕ್ಷ ಜಿ. ಮಂಜುನಾಥ್, ನಿರ್ದೇಶಕರಾದ ಪಿ.ಸಿ. ವೆಂಕಟೇಶ್, ಎ.ಆರ್.ಶಿವಕುಮಾರ್, ಎ.ಎಸ್.ಕೇಶವ, ಕೆ.ಜಿ.ಗೋಪಾಲ್, ಡಿ. ಪ್ರಶಾಂತ್ ಕುಮಾರ್, ಬಿ.ಆರ್.ಉಮಾಕಾಂತ್, ನಾರಾಯಣ್ ಎನ್.ನಾಯ್ಡು, ಎ. ಗಿರಿಜಾ, ಡಾ.ಆರ್.ಇಂದಿರಾ, ವೃತ್ತಿಪರ ನಿರ್ದೇಶಕರಾದ ಎ.ಆರ್.ನಾಗರಾಜನ್, ಕೆ.ಎಂ.ಕೃಷ್ಣಮೂರ್ತಿ, ಪ್ರಭಾರಿ ವ್ಯವಸ್ಥಾಪಕರಾದ ಎ.ಎಸ್.ಪುಷ್ಪಲತಾ ಸೇರಿದಂತೆ ಬ್ಯಾಂಕ್ ಸಿಬ್ಬಂದಿ ಹಾಗೂ ಸದಸ್ಯರು ಹಾಜರಿದ್ದರು.

# ಆರ್‌ಬಿಐ ಫಿನ್‌ಟೆಕ್ ವಿಭಾಗದ ಮುಖ್ಯಸ್ಥರಾಗಿ ವಾಸುದೇವನ್



**ಹೊಸದಿಲ್ಲಿ :** ಭಾರತೀಯ ರಿಸರ್ವ್ ಬ್ಯಾಂಕ್‌ನ ಫಿನ್‌ಟೆಕ್ ವಿಭಾಗದ ನೂತನ ಮುಖ್ಯಸ್ಥರಾಗಿ ಪಿ. ವಾಸುದೇವನ್ ಅವರನ್ನು ನೇಮಕ ಮಾಡಲಾಗಿದೆ. ಅಜಯ್ ಕುಮಾರ್ ಚೌಧರಿ ನಿವೃತ್ತರಾದ ಹಿನ್ನೆಲೆಯಲ್ಲಿ ಆ ಸ್ಥಾನಕ್ಕೆ ವಾಸುದೇವನ್ ಅವರನ್ನು ನೇಮಕ ಮಾಡಲಾಗಿದೆ.

ಪಿ. ವಾಸುದೇವನ್ ಅವರು ಈ ಹಿಂದೆ ಪ್ರಧಾನ ವ್ಯವಸ್ಥಾಪಕರಾಗಿ ಹಣ ಪಾವತಿ ವ್ಯವಸ್ಥೆಯ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿದ್ದಾರೆ. ಜುಲೈ 6ರಂದು ಅವರನ್ನು ಕಾರ್ಯನಿರ್ವಾಹಕ ನಿರ್ದೇಶಕ ಹುದ್ದೆಗೆ ನೇಮಕ ಮಾಡಲಾಗಿತ್ತಲ್ಲದೇ ಕರೆನ್ಸಿ ನಿರ್ವಹಣೆ ಮತ್ತು ಜಾರಿ ನಿರ್ದೇಶನಾಲಯ, ಕಾರ್ಪೋರೇಟ್ ತಂತ್ರಗಾರಿಕೆ ಮತ್ತು ಬಜೆಟ್ ಜವಾಬ್ದಾರಿಗಳನ್ನು ನೀಡಲಾಗಿತ್ತು. ಈ ಜವಾಬ್ದಾರಿಗಳ ಜೊತೆಗೆ ಇನ್ನುಮುಂದೆ ಫಿನ್‌ಟೆಕ್ ವಿಭಾಗದ ಉಸ್ತುವಾರಿಯನ್ನೂ ವಾಸುದೇವನ್ ನೋಡಿಕೊಳ್ಳಲಿದ್ದಾರೆ.

# ನಿಮ್ಮ ಪ್ರಶ್ನೆ ನಮ್ಮ ಉತ್ತರ






▸▸ **ಸುಧಾಕರ್ ಭಟ್**, ಬ್ಯಾಂಕಿಂಗ್ ಸಲಹೆಗಾರರು.

**01. ನಮ್ಮ ಬ್ಯಾಂಕಿನಲ್ಲಿ ಒಟ್ಟು 13ಜನ ಆಡಳಿತ ಮಂಡಳಿಯ ಸದಸ್ಯರಿದ್ದು, ನಿಯಮಗಳ ಪ್ರಕಾರ ಒಂದು ಸ್ಥಾನ ಪರಿಶಿಷ್ಟ ಜಾತಿಗೆ ಸೇರಿದ ಸದಸ್ಯರಿಗೆ, ಒಂದು ಸ್ಥಾನ ಪರಿಶಿಷ್ಟ ಪಂಗಡಗಳಿಗೆ ಸೇರಿದ ಸದಸ್ಯರಿಗೆ ಎರಡು ಸ್ಥಾನಗಳನ್ನು ಮಹಿಳಾ ವರ್ಗದ ಸದಸ್ಯರಿಗೆ ಮತ್ತು ಎರಡು ಸ್ಥಾನಗಳನ್ನು ಹಿಂದುಳಿದ "ಅ" ಮತ್ತು "ಬ" ವರ್ಗದ ಸದಸ್ಯರಿಗೆ ಹಾಗೂ ಉಳಿದ 7ಜನ ಸಾಮಾನ್ಯ ಸದಸ್ಯರು ಇರುತ್ತಾರೆ. ಈ ಪೈಕಿ ಸಾಮಾನ್ಯ ವರ್ಗದಲ್ಲಿ ಇರುವ ಬಿಎ. ಎಲ್‌ಎಲ್‌ಬಿ ಪದವಿ ಪಡೆದ ಇಬ್ಬರು ನ್ಯಾಯವಾದಿಗಳು ಇರುವುದರಿಂದ ಅವರನ್ನೇ ವೃತ್ತಿಪರ ನಿರ್ದೇಶಕರು ಅಂತಾ ಪರಿಗಣಿಸಿ ಆಡಳಿತ ಮಂಡಳಿ ರಚಿಸಿ, ಈ ಕುರಿತು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ, ಬೆಂಗಳೂರು ಮತ್ತು ಸಂಬಂಧಪಟ್ಟ ಇಲಾಖೆಗಳಿಗೆ ವರದಿ ಸಲ್ಲಿಸಿರುತ್ತೇವೆ.**

**ನಮ್ಮ ಬ್ಯಾಂಕಿನ ಬೈಲಾ ಪ್ರಕಾರ ಪ್ರಸ್ತುತ ಈ 13 ಜನ ಆಡಳಿತ ಮಂಡಳಿಯ ಜೊತೆಗೆ ಇನ್ನೂ ಇಬ್ಬರನ್ನು ಕೋ-ಆಪ್ಟ್ (ಸಹಮತ) ಮೂಲಕ ವೃತ್ತಿಪರ ನಿರ್ದೇಶಕರೆಂದು ನೇಮಿಸಿಕೊಳ್ಳಲು ಅವಕಾಶವಿದೆ. ಈಗ ಮಂಡಳಿಯು ಬ್ಯಾಂಕಿಂಗ್ ವ್ಯವಸ್ಥಾಪನೆ ಹಾಗೂ ಹಣಕಾಸು ನಿರ್ವಹಣೆಯಲ್ಲಿ ಹೆಚ್ಚಿನ ಪರಿಣಿತಿ ಹೊಂದಿರುವ ಚಾರ್ಟರ್ಡ್ ಅಕೌಂಟೆಂಟ್‌ರಾಗಿ ಅನುಭವಿಕರಾಗಿರುವ ಒಬ್ಬರು ವೃತ್ತಿಪರ ನಿರ್ದೇಶಕರನ್ನು ಕೋ-ಆಪ್ಟ್ ಮೂಲಕ ಬಾಕಿ ಉಳಿದಿರುವ ಅವಧಿಗೆ ನೇಮಿಸಿಕೊಳ್ಳಬೇಕೆಂದು ಸುದೀರ್ಘವಾಗಿ ಚರ್ಚಿಸಲಾಯಿತು. ಕಾರಣ ಇನ್ನುಳಿದ ಅವಧಿಗೆ ಹೊಸದಾಗಿ ಇನ್ನೊಬ್ಬರು ವೃತ್ತಿಪರ ನಿರ್ದೇಶಕರನ್ನಾಗಿ ಕೋ-ಆಪ್ಟ್ ಮೂಲಕ ಆಯ್ಕೆ ಮಾಡಿಕೊಂಡಲ್ಲಿ, ಒಟ್ಟು 3 (ಮೂರು) ಜನ ವೃತ್ತಿಪರ ನಿರ್ದೇಶಕರಾಗುತ್ತಾರೆ. ಒಂದು ವೇಳೆ ನಾವು ಈಗ 3ನೇ ವೃತ್ತಿಪರ ನಿರ್ದೇಶಕರನ್ನು ಕೋ-ಆಪ್ಟ್ ಮಾಡಿಕೊಳ್ಳಬಹುದೋ ಹೇಗೆ ಮತ್ತು ಮಾಡಿಕೊಂಡಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ವಿವರವಾದ ಸೂಕ್ತ ಸಲಹೆಯನ್ನು ನೀಡಬೇಕಾಗಿ ವಿನಂತಿಸಿಕೊಳ್ಳುತ್ತೇವೆ.**

**– ಪಟ್ಟಣ ಸಹಕಾರ ಬ್ಯಾಂಕ್ ಲಿ., ವಿಜಯಪುರ ಜಿಲ್ಲೆ.**

**ಉತ್ತರ :** ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 28-ಏ(4ಏ) ರೀತ್ಯಾ ಪಟ್ಟಣ ಸಹಕಾರ ಬ್ಯಾಂಕು 13 ಮಂದಿ ಚುನಾಯಿತ ಮಂಡಳಿ ಸದಸ್ಯರನ್ನು ಹೊರತುಪಡಿಸಿ ಇಬ್ಬರು ವೃತ್ತಿಪರ ನಿರ್ದೇಶಕರನ್ನು ಸಹಮತದಿಂದ ಮಂಡಳಿಗೆ ಸೇರಿಸಿಕೊಳ್ಳತಕ್ಕದ್ದು. ಆದ್ದರಿಂದ ಕಾಯ್ದೆಯ ಮತ್ತು ಉಪವಿಧಿಯ ನಿಬಂಧನೆಗಳನನ್ನು ಪಾಲಿಸಲು ಬ್ಯಾಂಕು ಇಬ್ಬರು ಅರ್ಹ ವೃತ್ತಿಪರ ನಿರ್ದೇಶಕರನ್ನು ಸಹಮತದಿಂದ ಸೇರಿಸಿಕೊಳ್ಳುವುದು ಅನಿವಾರ್ಯ. ಗರಿಷ್ಠ ಇಬ್ಬರು ವೃತ್ತಿಪರ ನಿರ್ದೇಶಕರಿರಬಹುದಾದುರಿಂದ ಚುನಾಯಿತರಾಗಿ ವೃತ್ತಿಪರ ನಿರ್ದೇಶಕರಾಗಿ ನೇಮಕಗೊಂಡ ಇಬ್ಬರ ಹೆಸರನ್ನು ವೃತ್ತಿಪರ ನಿರ್ದೇಶಕರ ಪಟ್ಟಿಯಿಂದ ತೆಗೆದುಹಾಕಿ, ಆಡಿಟ್ ಕಮೀಟಿಯಲ್ಲಿ ಸೂಕ್ತ ಬದಲಾವಣೆ ಮಾಡುವುದು ಉಚಿತ.

**02. ಪಟ್ಟಣ ಸಹಕಾರ ಬ್ಯಾಂಕುಗಳು ತಮ್ಮ ಸದಸ್ಯರಿಗೆ ನೀಡುವ ಡಿವಿಡೆಂಡ್ ಮೇಲೆ ಮೂಲದಲ್ಲಿ ತೆರಿಗೆ ಕಡಿತ (ಟಿ.ಡಿ.ಎಸ್) ಮಾಡಬೇಕೆ?**

**– ರಾಜಾಜಿನಗರ ಸಹಕಾರ ಬ್ಯಾಂಕ್ ಲಿ., ಬೆಂಗಳೂರು.**

**ಉತ್ತರ :** ಈ ಮೊದಲು ಕಂಪನಿಗಳು ತಮ್ಮ ಷೇರುದಾರರಿಗೆ ನೀಡುವ ಡಿವಿಡೆಂಡ್ ಮೇಲೆ ತಗಲುವ ತೆರಿಗೆಯನ್ನು ತಾವೇ ಭರಿಸುತ್ತಿದ್ದವು. ಹಾಗಾಗಿ, ಡಿವಿಡೆಂಡ್ ಮೇಲೆ ಷೇರುದಾರರು ಪ್ರತ್ಯೇಕವಾಗಿ ತೆರಿಗೆ ನೀಡುವ ಅಗತ್ಯವಿರಲಿಲ್ಲ. ಆದರೆ, ಪಟ್ಟಣ ಸಹಕಾರ ಬ್ಯಾಂಕುಗಳು ಡಿವಿಡೆಂಡ್ ಮೇಲೆ ತೆರಿಗೆಯನ್ನು ಭರಿಸುವ ಅಗತ್ಯವಿರಲಿಲ್ಲ; ಹಾಗಾಗಿ ಪಟ್ಟಣ ಸಹಕಾರ ಬ್ಯಾಂಕುಗಳು ನೀಡುವ ಡಿವಿಡೆಂಡ್ ಮೇಲೆ ಸದಸ್ಯರು ತೆರಿಗೆ ಸಲ್ಲಿಸಬೇಕಾಗಿತ್ತು.

ಈಗ ಆದಾಯ ತೆರಿಗೆ ಕಾಯ್ದೆಗೆ ತಿದ್ದುಪಡಿಯಾಗಿದ್ದು, ಕಂಪನಿಗಳು ಲಾಭಾಂಶ ವಿತರಣಾ ತೆರಿಗೆಯನ್ನು ನೀಡುವ ಅಗತ್ಯವಿಲ್ಲ. ಹಾಗಾಗಿ, ಪಟ್ಟಣ ಸಹಕಾರ ಬ್ಯಾಂಕುಗಳು ಸೇರಿದಂತೆ ಎಲ್ಲ ಷೇರುಗಳ ಮೇಲೆ ನೀಡುವ ಡಿವಿಡೆಂಡ್ ಮೇಲೆ ಷೇರುದಾರರು ತೆರಿಗೆ ಪಾವತಿಸಬೇಕಾಗಿದೆ. ಆದ್ದರಿಂದ, ಸದಸ್ಯರು ಪಾರ್ಮ್ 15 ಜಿ / 15 ಹೆಚ್ ನೀಡದಿದ್ದಲ್ಲಿ ಮತ್ತು ಡಿವಿಡೆಂಡ್ ಮೊತ್ತ ರೂ.5000 ಮೀರಿದಲ್ಲಿ ಮೂಲದಲ್ಲಿ ತೆರಿಗೆ ಕಡಿತ ಮಾಡಬೇಕಾಗಿದೆ.

## ಸಹಕಾರ ಸಪ್ತಾಹ ಆಚರಣೆ



ಶ್ರೀ ರೇವಣಸಿದ್ದೇಶ್ವರ ಸಹಕಾರ ಬ್ಯಾಂಕ ನಿ., ಇಂಡಿ ಇದರ ಆವರಣದಲ್ಲಿ ದಿನಾಂಕ 14-11-2023 ರಂದು ಮಂಗಳವಾರ 70 ನೇ ಸಹಕಾರ ಸಪ್ತಾಹ ಅಂಗವಾಗಿ ಸಹಕಾರ ದ್ವಜಾರೋಹಣ ನೆರವೇರಿಸಲಾಯಿತು.

# ಒನ್‌ಲೈನ್ ನ್ಯೂಸ್

ಈ ಪುಟದಲ್ಲಿನ ಸುದ್ದಿಗಳನ್ನು ಓದಿದ್ದೀರಾ...?
**ಕುತೂಹಲಕಾರಿಯಾದ ಸುದ್ದಿಗಳು** ನಿಮ್ಮ ಕಣ್ಣು ತಪ್ಪಿದ್ದರೆ, ಇಲ್ಲಿವೆ ಓದಿ.

- ಕೇರಳದ ಉತ್ತರ ಪಾಲಕ್ಕಾಡ್ ಜಿಲ್ಲೆಯ ಖ್ಯಾತ ವಕೀಲರಾದ 98 ವರ್ಷದ ಪಿ ಬಾಲಸುಬ್ರಮಣ್ಯಂ ಮೆನನ್ ಕಳೆದ 73 ವರ್ಷಗಳಿಂದ ವಕೀಲರಾಗಿ ಸಕ್ರಿಯರಾಗಿದ್ದಾರೆ. ಅವರ ಸುದೀರ್ಘ ಕಾಲದ ವಕೀಲಿ ವೃತ್ತಿ ಗಿನ್ನೆಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ದಾಖಲೆ ಪುಸ್ತಕಗಳಲ್ಲಿ ದಾಖಲಿಸಲಾಗಿದೆ.
- ಥಾಯ್ಲೆಂಡ್ ಮತ್ತು ಶ್ರೀಲಂಕಾದಲ್ಲಿ ಇತ್ತೀಚೆಗೆ ನಡೆದ ಅಂತರರಾಷ್ಟ್ರೀಯ ಸೆಸ್ಟೊಬಾಲ್ ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸಿ ಚಿನ್ನ ಗೆದ್ದಿರುವ ಕೊಡಗಿನ ಯುವ ಕ್ರೀಡಾ ಪಟುಗಳಾದ ಸುಂಟಿಕೊಪ್ಪದ ಶಾಹಿಲ್ ಉಸ್ಮಾನ್ ಮತ್ತು ಇರ್ಷಾದ್ ಮುಸ್ತಫಾ ಅವರನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು.
- ಮಕ್ಕಳಲ್ಲಿ ಹೆಚ್ಚುತ್ತಿರುವ ಮಧುಮೇಹವನ್ನು ನಿಯಂತ್ರಿಸುವ ಉದ್ದೇಶದಿಂದ, ಡಾ.ಮನೋಹರ್ ನಾಗೇಶಪ್ಪ, ಅವರು ರೋಗದ ಕಾರಣಗಳು ಮತ್ತು ಅದನ್ನು ತ್ವರಿತವಾಗಿ ನಿಭಾಯಿಸುವ ವಿಧಾನಗಳ ಬಗ್ಗೆ ಶಾಲೆಗಳಲ್ಲಿ ಅರಿವು ಮೂಡಿಸಲು ಮುಂದಾಗಿದ್ದಾರೆ. ಆಹಾರ ಪದ್ಧತಿ ಮತ್ತು ಜಡ ಜೀವನಶೈಲಿಯು ಮಕ್ಕಳಲ್ಲಿ ಟೈಪ್ –2 ಮಧುಮೇಹವನ್ನು ಪತ್ತೆಹಚ್ಚಲು ಪ್ರಮುಖ ಕಾರಣಗಳಾಗಿವೆ.
- ಭಾರತದ ಬಾಹ್ಯಾಕಾಶ ಸಂಸ್ಥೆ ಇಸ್ರೋ ಈ ಹಿಂದೆ ಉಡಾವಣೆ ಮಾಡಿದ್ದ ಚಂದ್ರಯಾನ 3 ಲಾಂಚ್ ವೆಹಿಕಲ್ ಮೇಲ್ಭಾಗವು ಭೂಮಿಯ ವಾತಾವರಣಕ್ಕೆ ಮರು ಪ್ರವೇಶಿಸಿದ್ದು, ಬಹುಶಃ ಉತ್ತರ ಫೆಸಿಫಿಕ್ ಸಮುದ್ರದಲ್ಲಿ ಬೀಳಬಹುದು ಎಂದು ತಿಳಿದುಬಂದಿದೆ.
- ಕಳೆದ ವಾರ ಯಮುನೋತ್ರಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಸಿಲ್ಕ್ಯಾರಾ ಮತ್ತು ದಾಂಡಲ್ಗಾಂವ್ಗೆ ಸಂಪರ್ಕ ಕಲ್ಪಿಸುವ ನಿರ್ಮಾಣ ಹಂತದಲ್ಲಿದ್ದ ಸುರಂಗ ಕುಸಿದಿದ್ದು, ಸ್ಥಳದಲ್ಲಿ ಸಿಲುಕಿರುವ 40 ಕಾರ್ಮಿಕರನ್ನು ರಕ್ಷಿಸುವ ಕಾರ್ಯಾಚರಣೆಯು ಇನ್ನೂ ಮುಂದುವರೆದಿದೆ.
- ವಯೋಸಹಜ ಸಮಸ್ಯೆಯಿಂದಾಗಿ ಅಜ್ಜಿಗೆ ಕಣ್ಣಿನ ಪೊರೆ ಬೆಳೆದಿತ್ತು. ಆದರೆ, ಸಂಬಂಧಿಕರು ಆಕೆಯನ್ನು ವಿಜಯಪುರದಲ್ಲಿ ತಂದು ಬಿಟ್ಟು ಹೋಗಿದ್ದರು. ಅಜ್ಜಿಯ ಪಾಲಿಗೆ ದೇವರಂತೆ ಬಂದ ಖ್ಯಾತ ನೇತ್ರ ವೈದ್ಯರಾದ ಡಾ. ಪ್ರಭುದೇವ ಲಿಂಗದಳ್ಳಿ, ಆಕೆಗೆ ಚಿಕಿತ್ಸೆ ನೀಡಿ ದೃಷ್ಟಿ ಬರುವಂತೆ ಮಾಡಿದ್ದಾರೆ.
- ದಿಲ್ಲಿಯಲ್ಲಿ ಪ್ರತಿಷ್ಠಿತ ಗ್ರೇಟರ್ ಕೈಲಾಶ್ ಪ್ರದೇಶದ ಹಲವು ರೋಗಿಗಳನ್ನು ಬಲಿ ಪಡೆದ ನಕಲಿ ವೈದ್ಯರು ಮತ್ತು ಪ್ರಯೋಗಾಲಯಗಳ ಜಾಲವನ್ನು ಪೊಲೀಸರು ಪತ್ತೆ ಹಚ್ಚಿದ್ದು, ಡಾ. ನೀರಜ್ ಅಗರ್ವಾಲ್, ಆತನ ಪತ್ನಿ ಪೂಜಾ ಅಗರ್ವಾಲ್, ಡಾ. ಜಸ್ಪ್ರೀತ್ಸಿಂಗ್ ಅವರುಗಳನ್ನು ಪೊಲೀಸರು ಬಂಧಿಸಿದ್ದಾರೆ.

## ಓದುಗರ ಅನಿಸಿಕೆ...



**ಕಾದು ನೋಡಬೇಕಿದೆ :** ಅಮೆರಿಕದ ಫೆಡರಲ್ ರಿಸರ್ವ್ ಬಡ್ಡಿದರ ಯಥಾಸ್ಥಿತಿ ಮುಂದುವರಿಸಲು ನಿರ್ಧರಿಸಿರುವ ಪರಿಣಾಮವಾಗಿ ವಿದೇಶೀ ಹೂಡಿಕೆದಾರರು ಕಳೆದ ಕೆಲ ತಿಂಗಳಿಂದ ನಮ್ಮ ಮಾರುಕಟ್ಟೆಗಳಿಂದ ಬಂಡವಾಳ ಹಿಂತೆಗೆದುಕೊಂಡು ಅಮೆರಿಕದ ಮಾರುಕಟ್ಟೆಗಳಲ್ಲಿ ಸುರಿಯುತ್ತಿದ್ದಾರೆ. ಒಂದು ವೇಳೆ, ಫೆಡರಲ್ ರಿಸರ್ವ್ ತನ್ನ ಬಡ್ಡಿದರವನ್ನು ಹೆಚ್ಚಿಸಿದ್ದರೆ ದೇಶದ ಷೇರುಮಾರುಕಟ್ಟೆಯ ಕುಸಿಯುವ ಸಾಧ್ಯತೆ ಇತ್ತು. ಮುಂದಿನ ದಿನಗಳಲ್ಲಿ ಏನಾಗುವುದೂ ಕಾದು ನೋಡಬೇಕಿದೆ. ▸▸ **ಮೋಹನಕುಮಾರ್ ಕೆ., ಹಾಸನ**

**ಅನುದಾನ ಬಿಡುಗಡೆ ಮಾಡಲಿ :** ಪ್ರಸಕ್ತ ಸಾಲಿನಲ್ಲಿ ಕರ್ನಾಟಕದ ಎಸ್‌ಜಿಎಸ್‌ಟಿ ಸಂಗ್ರಹ ಶೇಕಡ 16 ಬೆಳವಣಿಗೆ ದಾಖಲಿಸಿದೆ. ಇದರಿಂದಾಗಿ 2023–24ರಲ್ಲಿ 23,400 ಕೋಟಿ ರೂಪಾಯಿಗೆ ಸಂಗ್ರಹವಾಗಿದೆ. ಇದೇ ಸಮಯದಲ್ಲಿ ಕೇಂದ್ರದ ಜಿಎಸ್‌ಟಿ ಒಟ್ಟು 1.72 ಲಕ್ಷ ಕೋಟಿ ರೂಪಾಯಿ ಸಂಗ್ರಹವಾಗಿದೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ಬರಬೇಕಾದ ಜಿಎಸ್‌ಟಿ ಪಾಲು ಹಾಗೂ ಅನುದಾನಗಳನ್ನು ತಡ ಮಾಡದೆ ಬಿಡುಗಡೆ ಮಾಡಲಿ.
▸▸ **ಅವಿನಾಶ್ ನಾಯಕ್, ಕುಂದಾಪುರ**

ಸಂಪಾದಕರು :
**ಪುಂಡಲೀಕ ಎನ್. ಕೇರೂರೆ,**
ಮುಖ್ಯ ಕಾರ್ಯನಿರ್ವಹಣಾಧಿಕಾರಿ,
ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ.,
ಬೆಂಗಳೂರು.

**ಇವರಿಗೆ,**

Edited, Published and printed by Pundalik N. Kerure, C.E.O. on behalf of the
Karnataka State Co-operative Urban Banks Federation Ltd., Bangalore - 560027.
Published at : # 132, K.H. Road, Bangalore - 560027.
Printed at : Navarathna Printers, # 35, 3rd Cross, Sudhamanagar, Bangalore – 560027.